ಕರ್ನಾಟಕ ಸರ್ಕಾರ

# ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-09

ಸಂಖ್ಯೆ:ಆಡಳಿತ/90/2018-19 ದಿನಾಂಕ:29.08.2018

5/9/18.

## ಸುತ್ತೋಲೆ

ವಿಷಯ: ವರ್ಗಾವಣೆ/ಸ್ಥಳ ನೇಮಕಾತಿ ಆದೇಶಗಳಿಗೆ ಜಿಲ್ಲಾ ಹಂತದಲ್ಲಿ ಚಲಾನಾದೇಶ ನೀಡುವುದನ್ನು ರದ್ದುಪಡಿಸುವ ಬಗ್ಗೆ.

*********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಆಯುಕ್ತಾಲಯ ಮತ್ತು ನಿರ್ದೇಶನಾಲಯದಿಂದ ಈ ಇಲಾಖೆಯ ಅಧಿಕಾರಿ/ಸಿಬ್ಬಂಧಿಗಳಿಗೆ ವರ್ಗಾವಣೆ ಆದೇಶಗಳನ್ನು ಹಾಗೂ ಸ್ಥಳನಿಯುಕ್ತಿ ಆದೇಶವನ್ನು ಹೊರಡಿಸಲಾಗುತ್ತಿದ್ದು ಸದರಿ ಆದೇಶಗಳನ್ನು ಜಾರಿಗೊಳಿಸಲು ಕೆಲವು ಜಿಲ್ಲೆಗಳಲ್ಲಿ ಹಾಗೂ ಕೆಲವು ಕೆಳಹಂತದ ಕಛೇರಿಗಳಿಂದ ಚಲಾನಾದೇಶ ನೀಡುತ್ತಿರುವುದು ಗಮನಕ್ಕೆ ಬಂದಿರುತ್ತದೆ. ಈ ಪ್ರಕ್ರಿಯೆಯಿಂದಾಗಿ ಅನಗತ್ಯ ವಿಳಂಬಕ್ಕೆ ಕಾರಣವಾಗುತ್ತಿದೆ.

ಇನ್ನು ಮುಂದೆ ವರ್ಗಾವಣೆ/ಸ್ಥಳ ನೇಮಕಾತಿ ಆದೇಶಗಳಿಗೆ ಜಿಲ್ಲಾ ಹಂತದಲ್ಲಿ ಚಲಾನಾದೇಶ ನೀಡುವುದನ್ನು ರದ್ದುಪಡಿಸಲಾಗಿದೆ. ವರ್ಗಾವಣೆಯ ನೇಮಕಾತಿ ಆದೇಶಗಳನ್ನು ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲಾಗುತ್ತಿದ್ದು. ಅವುಗಳೊಂದಿಗೆ ತಾಳೆ ನೋಡಿ ಅಧಿಕಾರಿ/ಸಿಬ್ಬಂದಿಗಳನ್ನು ಕರ್ತವ್ಯದಿಂದ ಬಿಡುಗಡೆಗೊಳಿಸಲು ಹಾಗೂ ವರದಿ ಮಾಡಿಸಿಕೊಳ್ಳಲು ಸೂಚಿಸಿದೆ. ತಪ್ಪಿದ್ದಲ್ಲಿ, ಅಂತಹ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು.

4-9

ಆಯುಕ್ತರು
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು.
ಬೆಂಗಳೂರು.

ಇವರಿಗೆ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ:

1. ನಿರ್ದೇಶಕರು, ರಾಜ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಸ್ಥೆ, ಬೆಂಗಳೂರು.
2. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
3. ಎಲ್ಲಾ ಜಿಲ್ಲಾ ಶಸ್ತ್ರ ಚಿಕಿತ್ಸಕರು/ವೈದ್ಯಕೀಯ ಅಧೀಕ್ಷಕರು.
4. ಎಲ್ಲಾ ಪ್ರಾಂಶುಪಾಲರು, ಜಿಲ್ಲಾ ತರಬೇತಿ ಕೇಂದ್ರ.
5. ಎಲ್ಲಾ ಸ್ವಾಯತ್ತ ಸಂಸ್ಥೆಯ ಮುಖ್ಯಸ್ಥರುಗಳಿಗೆ, (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ನಿರ್ದೇಶನಾಲಯ ಮತ್ತು ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯಕ್ಕೆ ಸಂಬಂಧಿಸಿದ).

ಪ್ರತಿಯನ್ನು:-

1. ಆಯುಕ್ತರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು. ಬೆಂಗಳೂರು ಇವರಿಗೆ ಕಳುಹಿಸುತ್ತಾ ಮಾನ್ಯ ಆಯುಕ್ತರ ಗಮನಕ್ಕೆ ತರಲು ಕೋರಿದೆ.
2. ನಿರ್ದೇಶಕರ ಆಪ್ತ ಶಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು. ಬೆಂಗಳೂರು ಇವರಿಗೆ ಕಳುಹಿಸುತ್ತಾ ಮಾನ್ಯ ನಿರ್ದೇಶಕರ ಗಮನಕ್ಕೆ ತರಲು ಕೋರಿದೆ.
3. ಆಡಳಿತಾಧಿಕಾರಿಗಳು ಸಾಮಾನ್ಯಸಾರಿಗೆ, ಕು.ಕ, ಆರೋಗ್ಯ ಮತ್ತು ಕುಕ ಸೇವೆಗಳು, ಬೆಂಗಳೂರು.
4. ಕಛೇರಿ ಪ್ರತಿ.

Scanned by CamScanner